ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.12/2022-23 ದಿನಾಂಕ: 18-04-2023

**2023ನೇ ಸಾಲಿಗೆ ಬಿ.ಎಸ್.ಸಿ. (ನರ್ಸಿಂಗ್) ಕೋರ್ಸುಗಳಿಗೆ ಸಾಮಾನ್ಯ ಪ್ರವೇಶ ಪರೀಕ್ಷೆ ಮೂಲಕ ಪ್ರವೇಶ**

ಸರ್ಕಾರದ ಆದೇಶ ಸಂಖ್ಯೆ ಎಂಇಡಿ 51 ಆರ್‌ಜಿಯು 2023 ದಿನಾಂಕ 13-04-2023 ರ ಅನ್ವಯ 2023ನೇ ಸಾಲಿನ ಬಿ.ಎಸ್.ಸಿ (ನರ್ಸಿಂಗ್) ಕೋರ್ಸುಗಳ ಪ್ರವೇಶಕ್ಕೂ ಸಹ ಅಭ್ಯರ್ಥಿಗಳು ಪ್ರಾಧಿಕಾರವು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಬೇಕಿರುತ್ತದೆ.

ಅರ್ಹತೆ: ಅಭ್ಯರ್ಥಿಯು ಎರಡನೇ ಪಿಯುಸಿ / 12ನೇ ತರಗತಿ / ತತ್ಸಮಾನ ಪರೀಕ್ಷೆಯಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ ಮತ್ತು ಇಂಗ್ಲೀಷನ್ನು ಅಭ್ಯಸಿಸಿ ಒಟ್ಟಾರೆ ಕನಿಷ್ಠ ಶೇಕಡ 45ರಷ್ಟು ಅಂಕಗಳನ್ನು ಪಿಸಿಬಿ ವಿಷಯಗಳಲ್ಲಿ ಪಡೆದು ತೇರ್ಗಡೆ ಹೊಂದಿರಬೇಕು. (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿಗಳಿಗೆ ಸೇರಿರುವ ಅಭ್ಯರ್ಥಿಗಳು ಶೇ. 40%) SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

ಈ ಹಿನ್ನಲೆಯಲ್ಲಿ ಬಿ.ಎಸ್.ಸಿ (ನರ್ಸಿಂಗ್) ಕೋರ್ಸುಗಳ ಪ್ರವೇಶಾತಿಗೆ ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳು ದಿನಾಂಕ 18-04-2023 ರ ರಾತ್ರಿ 8.00 ರಿಂದ 22-04-2023 ರ ರಾತ್ರಿ 11.59 ರವರೆಗೆ ಸಿಇಟಿ-2023 ಕ್ಕೆ ನೊಂದಣಿ ಮಾಡಿಕೊಂಡು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸ ಬಹುದಾಗಿದೆ ಹಾಗು ದಿನಾಂಕ 23-04-2023 ರೊಳಗೆ ನಿಗದಿತ ಶುಲ್ಕವನ್ನು ಪಾವತಿಸಬಹುದಾಗಿದೆ. ನಂತರ ಬಿ.ಎಸ್.ಸಿ (ನರ್ಸಿಂಗ್) ಕೋರ್ಸುಗಳ ಪ್ರವೇಶಾತಿಗೆ ಅರ್ಹತೆ ಪಡೆಯಲು ಅಭ್ಯರ್ಥಿಗಳು ಪ್ರಾಧಿಕಾರವು ನಡೆಸುವ ಸಿಇಟಿ-2023ಕ್ಕೆ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರದ ವಿಷಯಗಳಿಗೆ ಹಾಜರಾಗಬೇಕು.

ಕರ್ನಾಟಕೇತರ ಅಭ್ಯರ್ಥಿಗಳಿಗೆ ಯಾವುದೇ ಮೀಸಲಾತಿಯ ಸವಲತ್ತುಗಳು ಅನ್ವಯಿಸುವುದಿಲ್ಲ. ಕರ್ನಾಟಕೇತರ ಅಭ್ಯರ್ಥಿಗಳು ಸರ್ಕಾರದ ಪಾಲಿನ ಬಿ.ಎಸ್.ಸಿ ನರ್ಸಿಂಗ್ ಕೋರ್ಸುಗಳ ಪ್ರವೇಶಕ್ಕೂ ಅರ್ಹತೆ ಪಡೆಯುವುದಿಲ್ಲ.

ಸಿಇಟಿ-2023ಕ್ಕೆ ಈಗಾಗಲೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಕರ್ನಾಟಕದ ಅಭ್ಯರ್ಥಿಗಳು ಬಿ.ಎಸ್.ಸಿ (ನರ್ಸಿಂಗ್) ಕೋರ್ಸುಗಳ ಪ್ರವೇಶಾತಿಗೆ ಪ್ರತ್ಯೇಕವಾಗಿ ನೊಂದಣಿ ಮಾಡುವ ಅವಶ್ಯಕತೆ ಇರುವುದಿಲ್ಲ.

ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಅರ್ಜಿ ಸಲ್ಲಿಸುವ ವಿಧಾನ, ವಿದ್ಯಾರ್ಹತೆ ಹಾಗು ಇತರೆ ವಿವರಗಳ ಮಾಹಿತಿಯನ್ನು ಪಡೆಯಬಹುದಾಗಿದೆ.

**ಸಿಇಟಿ-2023ಕ್ಕೆ ನೊಂದಣಿ ಹಾಗು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಣೆ**

2023ನೇ ಸಾಲಿನ ವಿವಿಧ ವೃತ್ತಿಪರ ಕೋರ್ಸುಗಳ ಸರ್ಕಾರಿ ಸೀಟುಗಳ ಪ್ರವೇಶಕ್ಕಾಗಿ ಪ್ರವೇಶಾತಿಗೆ ಸಾಮಾನ್ಯ ಪ್ರವೇಶ ಪರೀಕ್ಷೆ ಯನ್ನು ದಿನಾಂಕ 20-05-2023 ಮತ್ತು 21-05-2023 ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅಧಿಸೂಚನೆಯನ್ನು ಪ್ರಕಟಿಸಿ ಅರ್ಹ ಕರ್ನಾಟಕದ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿತ್ತು ಹಾಗು ದಿನಾಂಕ 10-04-2023 ರ ವರೆಗೆ ಅರ್ಜಿ ಶುಲ್ಕವನ್ನು ಪಾವತಿಸಲು ದಿನಾಂಕವನ್ನು ವಿಸ್ತರಿಸಲಾಗಿತ್ತು.

ಕರ್ನಾಟಕದ ಅರ್ಹ ಅಭ್ಯರ್ಥಿಗಳು ಇಲ್ಲಿಯವರೆಗೆ ಸಿಇಟಿ-2023ಕ್ಕೆ ನೊಂದಣಿ ಮಾಡದಿದ್ದಲ್ಲಿ ಅಥವಾ ನೊಂದಣಿ ಮಾಡಿ ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡದೇ ಇದ್ದಲ್ಲಿ, ಅಥವಾ ಶುಲ್ಕ ಪಾವತಿ ಮಾಡದೇ ಇದ್ದಲ್ಲಿ; ದಿನಾಂಕ 22-04-2023ರ ವರೆಗೆ ನೊಂದಣಿ ಮಾಡಲು ಮತ್ತು ಅರ್ಜಿ ಸಲ್ಲಿಸಲು ಹಾಗು ದಿನಾಂಕ 23-04-2023ರ ವರೆಗೆ ಶುಲ್ಕವನ್ನು ಪಾವತಿಸಲು ಅಂತಿಮ ಅವಕಾಶವನ್ನು ನೀಡಲಾಗಿರುತ್ತದೆ. ಸಿಇಟಿ-2023ಕ್ಕೆ ಅರ್ಜಿ ಸಲ್ಲಿಸಲು ಯಾವುದೇ ಕಾರಣಕ್ಕೂ ದಿನಾಂಕವನ್ನು ಮತ್ತೊಮ್ಮೆ ವಿಸ್ತರಿಸಲಾಗುವುದಿಲ್ಲ.
ರಾಷ್ಟ್ರೀಯತೆಯನ್ನು ತಿದ್ದುಪಡಿ ಮಾಡಿಕೊಳ್ಳದೆ ಇರುವ ಓಸಿಐ ಅಭ್ಯರ್ಥಿಗಳು ನೇರವಾಗಿ ಪ್ರಾಧಿಕಾರಕ್ಕೆ ನಿಗದಿತ ಶುಲ್ಕವನ್ನು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರ ಹೆಸರಿನಲ್ಲಿ ಪಡೆದ ಡಿಡಿ ಯೊಂದಿಗೆ ದಿನಾಂಕ 21-04-2023ರೊಳಗೆ ಹಾಜರಾಗುವುದು.

ಕಾರ್ಯನಿರ್ವಾಹಕ ನಿರ್ದೇಶಕರು.

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in